ಕರ್ನಾಟಕ ಸರ್ಕಾರ

ಡಿಸೆಂಬರ್ 20, 2016

# ಬೆಂಗಳೂರು – ದೇಶದ ವಿಜ್ಞಾನದ ರಾಜಧಾನಿ – ಮುಖ್ಯಮಂತ್ರಿ



**ಬೆಂಗಳೂರು ಡಿಸೆಂಬರ್ 20 :** ಕರ್ನಾಟಕ ರಾಜ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಕ್ಷೇತ್ರದಲ್ಲಿ ಸಾಕಷ್ಟು ಪ್ರಗತಿ ಸಾಧಿಸಿದ್ದು ಇದೀಗ "ಬೆಂಗಳೂರು – ದೇಶದ ವಿಜ್ಞಾನದ ರಾಜಧಾನಿಯಾಗಿದೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಇಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಮತ್ತು ಕ್ರೈಸ್ಟ್ ವಿಶ್ವವಿದ್ಯಾನಿಲಯ ಸಹಯೋಗದೊಂದಿಗೆ 21ನೇ ಶತಮಾನದಲ್ಲಿ "ವಿಜ್ಞಾನ, ತಂತ್ರಜ್ಞಾನ ಮತ್ತು ಅವಿಷ್ಕಾರಗಳು " ಎಂಬ ವಿಷಯದ ಬಗ್ಗೆ ಅಕಾಡೆಮಿಯ 9ನೇ ವಾರ್ಷಿಕ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡುತ್ತಾ, ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಜ್ಞಾನ ಕ್ಷೇತ್ರದಲ್ಲಿ ಬೆಂಗಳೂರು ಖ್ಯಾತಿ ಪಡೆದಿರುವುದು ಜಗತ್ತಿಗೆ ಗೊತ್ತಿದೆ. ನಮ್ಮ ಬೆಂಗಳೂರನ್ನು ಐಟಿ ಹಬ್, ಸಿಲಿಕಾನ್ ಸಿಟಿ ಮತ್ತು ವಿಜ್ಞಾನದ ರಾಜಧಾನಿ ಎಂದು ವಿವಿಧ ಹೆಸರುಗಳಿಂದ ಗುರುತಿಸುತ್ತಿರುವುದು ಹೆಮ್ಮೆಯ ವಿಷಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅತ್ಯಂತ ಸಂತೋಷದಿಂದ ನುಡಿದರು.

ಮೂಢನಂಬಿಕೆಗಳನ್ನು ಬಿಟ್ಟು ವೈಜ್ಞಾನಿಕ, ವೈಚಾರಿಕ ಹಾಗೂ ಮಾನವೀಯತೆಯ ವಿಷಯಗಳ ಬಗ್ಗೆ ಹೆಚ್ಚು ಆಸಕ್ತಿವಹಿಸಿ ದೇಶದ ಅಭಿವೃದ್ಧಿಗೆ ನಾವು ಮತ್ತು ಯುವಜನತೆ ಹೆಚ್ಚಿನ ರೀತಿಯಲ್ಲಿ ಶ್ರಮಿಸಬೇಕು, ವಿವಿಧ ದೇಶಗಳೊಂದಿಗೆ ಪೈಪೋಟಿ ನೀಡಲು ನಮ್ಮ ಯುವಜನತೆ ಹೆಚ್ಚು ಹೆಚ್ಚು ವಿಜ್ಞಾನದ ಬಗ್ಗೆ ಹೆಚ್ಚು ಜ್ಞಾನವನ್ನು ರೂಪಿಸಿಕೊಳ್ಳಬೇಕು. ಕರ್ನಾಟಕದಲ್ಲಿ ಶೇಕಡಾ 70 ಭಾಗ ರೈತಾಪಿವರ್ಗ ಇರುವುದರಿಂದ ರೈತರಿಗೆ ಅನುಕೂಲವಾಗುವಂತೆ ವಿಜ್ಞಾನದಿಂದ ಏನು ಮಾಡಬೇಕು ಎಂದು ವಿದ್ಯಾರ್ಥಿಗಳು ಅವಿಷ್ಕರಿಸಬೇಕು ಎಂದರು.

ಇ-ಆಫೀಸ್, ಇ-ಮೊಬೈಲ್ ತಂತ್ರಜ್ಞಾನವನ್ನು ಅಳವಡಿಸುವುದರ ಮುಖಾಂತರ ಆಡಳಿತದಲ್ಲಿ ಪಾರದರ್ಶಕ ಮತ್ತು ತ್ವರಿತವಾಗಿ ಸೇವೆಯನ್ನು ಒದಗಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿಗಳು ಹೇಳಿದರು.

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಎ.ಎಸ್. ಕಿರಣಕುಮಾರ್ ಅವರು ಜೀವಮಾನ ಸಾಧನೆ ಪ್ರಶಸ್ತಿ ಸ್ವೀಕರಿಸಿ ಮಾತನಾಡುತ್ತಾ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನದಿಂದ ನಮ್ಮ ಸುತ್ತಮುತ್ತ ನಡೆಯುವ ಬೆಳವಣಿಗೆಯನ್ನು ಮುಂಚಿತವಾಗಿಯೇ ತಿಳಿದುಕೊಳ್ಳಬಹುದು ಎಂದು ತಿಳಿಸಿದರು.

ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ನಮ್ಮ ದೇಶ ಮುಂಚೂಣಿಯಲ್ಲಿದ್ದು ನಮ್ಮ ಅಕಾಡೆಮಿಯಿಂದ ಹಳ್ಳಿ ಹಳ್ಳಿಗೆ ಹೋಗಿ ವಿಜ್ಞಾನದ ಬಗ್ಗೆ ಅರಿವು ಮೂಡಿಸುವ ಹಾಗೂ ಉಪನ್ಯಾಸ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳುವ ಮೂಲಕ ಹೆಚ್ಚಿನ ಪ್ರಾಧ್ಯಾನತೆ ನೀಡಲಾಗುತ್ತಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಅಧ್ಯಕ್ಷ ಹಾಗೂ ಇಸ್ರೋ ಸಂಸ್ಥೆಯ ಮಾಜಿ ಅಧ್ಯಕ್ಷ ಪ್ರೊ. ಯು.ಆರ್. ರಾವ್ ಅವರು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಯೋಜನಾ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಂ.ಆರ್. ಸೀತಾರಾಂ, ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಮಂಜುಳಾ, ಕ್ರೈಸ್ಟ್ ವಿಶ್ವವಿದ್ಯಾನಿಲಯದ ಕುಲಪತಿ ಡಾ. ಫಾದರ್

ಥಾಮಸ್ ಸಿ. ಮ್ಯಾಥ್ಯೂ ಅವರು ಸೇರಿದಂತೆ ಇಲಾಖೆಯ ಅಧಿಕಾರಿಗಳು, ವಿಶ್ವ ವಿದ್ಯಾಲಯದ ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

----------------------------